ಕರ್ನಾಟಕ ಸರ್ಕಾರ

ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

# ಮಾತು ಕತೆ



## ಕೊಡಗು

Volume 1 | ಜನವರಿ 2023

## ಹೊದ್ದೂರು ಗ್ರಾಮ ಪಂಚಾಯಿತಿ

### ಅಧ್ಯಕ್ಷರ ಸಂದೇಶ (ಪ್ರಕಾಶಕರು)



ಮಡಿಕೇರಿ ತಾಲ್ಲೂಕು ಹೊದ್ದೂರು ಗ್ರಾಮ ಪಂಚಾಯತಿಯು 3 ಕಂದಾಯ ಗ್ರಾಮಗಳು, 8 ಕಾಲೋನಿಗಳನ್ನು ಹೊಂದಿರುವ ಶೇ.80 ರಷ್ಟು ಬಡ ಕೂಲಿ ಕಾರ್ಮಿಕರು ಮತ್ತು ರೈತಾಪಿ ಜನರು ವಾಸವಿರುವ ಪ್ರದೇಶವಾಗಿದೆ. ಈ ಪಂಚಾಯತಿಯು ಸ್ವಂತ ಆದಾಯ ಮೂಲಗಳು ಮತ್ತು ವಾಣಿಜ್ಯ ಚಟುವಟಿಕೆಗಳು ಕಡಿಮೆ ಇದ್ದಾಗಿಯೂ ಲಭ್ಯವಿರುವ ಸಂಪನ್ಮೂಲಗಳನ್ನು, ಸರಕಾರದ ಅನುದಾನಗಳನ್ನು ಸಮರ್ಪಕ ಬಳಸುವುದರೊಂದಿಗೆ ಸಾರ್ವಜನಿಕರಿಗೆ ಸಮಗ್ರ ಸೇವೆಯನ್ನು ಒದಗಿಸುತ್ತಿದೆ. ಮಾತುಕತೆ ಮಾಸಪತ್ರಿಕೆಯನ್ನು ನಮ್ಮ ಪಂಚಾಯತಿ ವತಿಯಿಂದ ಹೊರತರಲು ಅವಕಾಶ ದೊರಕಿದ್ದು ಸಂತಸದ ವಿಷಯ – **ಶ್ರೀಮತಿ ಪಿ. ಎ. ಕುಸುಮಾವತಿ**

### ಮುಖ್ಯ ಕಾರ್ಯನಿರ್ವಹಣಾಧಿಕಾರಿಯವರ ಸಂದೇಶ



ಕೊಡಗು ಜಿಲ್ಲೆಯಾದ್ಯಂತ ಅತಿ ಹೆಚ್ಚು ಒತ್ತು ನೀಡಿ ಸಂಜೀವಿನಿ ಒಕ್ಕೂಟದ ಮಹಿಳೆಯರನ್ನು ಪ್ರೋತ್ಸಾಹಿಸಲಾಗುತ್ತಿದೆ. ಇದರ ಪ್ರಮುಖ ಭಾಗವಾಗಿ ಕಸ ಸಂಗ್ರಹಣೆಯಲ್ಲಿ ಆದಾಯದ ಮೂಲವನ್ನು ಗಳಿಸುವ ನಿಟ್ಟಿನಲ್ಲಿ ಮಹಿಳಾ ಒಕ್ಕೂಟಗಳು ಪ್ರಮುಖ ಪಾತ್ರ ವಹಿಸುತ್ತಿವೆ. ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯನ್ನು ಮಾನ್ಯ ಸರ್ಕಾರದ ಮಾರ್ಗದರ್ಶನದಂತೆ ಮನೆ ಮನೆಗೆ ತಲುಪಿಸುವ ಪ್ರಯತ್ನ ಮಾಡಲಾಗುತ್ತಿದೆ. ಸರ್ಕಾರದಿಂದ ಸಿಗುವ ಸೌಲಭ್ಯವನ್ನು ಫಲಾನುಭವಿಗಳಿಗೆ ತಲುಪಿಸುವ ಕೆಲಸವನ್ನು ನಮ್ಮ ಸಿಬ್ಬಂದಿ ಮತ್ತು ಆಡಳಿತ ಮಂಡಳಿ ಸಹಯೋಗದಲ್ಲಿ ಮಾಡಲಾಗಿದೆ. – **ಡಾ. ಆಕಾಶ್ ಎಸ್. (ಭಾ.ಆ.ಸೇ)**

### ಪಿ.ಡಿ.ಓ ರವರ ಸಂದೇಶ (ಸಂಪಾದಕರು)



ಹೊದ್ದೂರು ಗ್ರಾಮ ಪಂಚಾಯಿತಿಯು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಆಶೋತ್ತರಗಳನ್ನು ಜನಸಾಮಾನ್ಯರಿಗೆ ತಲುಪಿಸುವಲ್ಲಿ ವಿನೂತನ ಕ್ರಮಗಳನ್ನು ಅನುಷ್ಟಾನಗೊಳಿಸುತ್ತಿದೆ. ಯೋಜನೆಗಳ ಅನುಷ್ಠಾನಗಳಲ್ಲಿ ಜನ ಸಹಭಾಗಿತ್ವ, ಪಾರದರ್ಶಕತೆಗೆ ಹೆಚ್ಚು ಒತ್ತು ನೀಡಲಾಗುತ್ತಿದೆ. ಸಾರ್ವಜನಿಕರಿಗೆ ಅತ್ಯುತ್ತಮ ಸೇವೆ ಲಭ್ಯವಂತಾಗಿಸುವ ನಿಟ್ಟಿನಲ್ಲಿ ಜನ ಸ್ನೇಹಿ ಹಾಗೂ ಸುಸಜ್ಜಿತ ಪಂಚಾಯತಿ ಕಚೇರಿ ನಿರ್ಮಾಣ ಮಾಡಲಾಗಿದೆ. ಸಾರ್ವಜನಿಕರಿಗೆ ಎಲ್ಲಾ ಸೇವೆಗಳು ಸಕಾಲದಲ್ಲಿ ದೊರಕುವಂತಾಗಿಸಲು ಬಾಪೂಜಿ ಸೇವಾ ಕೇಂದ್ರ, ಗ್ರಾಮ ಲೆಕ್ಕಾಧಿಕಾರಿಗಳ ವಿಭಾಗ ಹೀಗೆ ಪ್ರತ್ಯೇಕ ವಿಭಾಗಗಳನ್ನು ಪ್ರಾರಂಭಿಸಲಾಗಿದೆ. – **ಎ. ಎ. ಅಬ್ದುಲ್ಲಾ**

### ಸುಸಜ್ಜಿತ ಗ್ರಾಮ ಪಂಚಾಯಿತಿ ಕಟ್ಟಡ

ಕೊಡಗು ಜಿಲ್ಲೆಯ ಮಡಿಕೇರಿ ತಾಲ್ಲೂಕಿನ ಹೊದ್ದೂರು ಗ್ರಾಮ ಪಂಚಾಯಿತಿ ಜಿಲ್ಲಾ ಕೇಂದ್ರದಿಂದ 20ಕಿಮೀ ದೂರದಲ್ಲಿದ್ದು, 15 ಚುನಾಯಿತ ಸದಸ್ಯರು ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಜಿಲ್ಲೆಯ ಮೊದಲ ಡಿಟಿಟಲ್ ಗ್ರಂಥಾಲಯ ಹಾಗೂ ಗ್ರಾಮಕ್ಕೊಂದು ಗ್ರಂಥಾಲಯ ಯೋಜನೆ ಈ ಪಂಚಾಯಿತಿಯಲ್ಲಿ ಪ್ರಾರಂಭವಾಯಿತು. ಈ ಯೋಜನೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳು ಅಳವಡಿಸಿಕೊಳ್ಳಲು ಮಾದರಿ ಯೋಜನೆಯಾಗಿದೆ. ಈ ಪಂಚಾಯಿತಿಯು 2021 ನೇ ಸಾಲಿನಲ್ಲಿ ಗಾಂಧಿ ಗ್ರಾಮ ಪುರಸ್ಕಾರ ಹಾಗೂ ಕೋವಿಡ್ ನಿರ್ವಹಣೆಯಲ್ಲಿ ಅತ್ಯುತ್ತಮ ಸಾಧನೆಗೆ ಕೇಂದ್ರ ಸರಕಾರದ ಪಂಚಾಯತ್ ರಾಜ್ ಸಚಿವಾಲಯದ ಪ್ರಶಂಸೆಗೆ ಪಾತ್ರವಾಗಿದೆ.





### ಸರಕಾರಿ ಹುದ್ದೆಗಳ ಅಧಿಸೂಚನೆಗಳು


ಕರ್ನಾಟಕ ಲೋಕಸೇವಾ ಆಯೋಗದಲ್ಲಿ ವಿವಿಧ ಹುದ್ದೆಗಳು

https://kpsc.kar.nic.in

ಕೊಡಗು ಜಿಲ್ಲೆಯ ಎಂಜಿಎನ್ಆರ್ಇಜಿಎ ಯೋಜನೆಯಡಿ ಖಾಲಿ ಇರುವ ವಿವಿಧ ಹುದ್ದೆಗಳಿಗೆ ಹೊರಗುತ್ತಿಗೆ ಆದಾರದಲ್ಲಿ ಭರ್ತಿ ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

https://kodagu.nic.in

### ಡಿಜಿಟಲೀಕೃತ ಗ್ರಾಮೀಣ ಗ್ರಂಥಾಲಯ



ಹೊದ್ದೂರು ಗ್ರಾಮ ಪಂಚಾಯತಿ ಡಿಜಿಟಲ್ ಗ್ರಂಥಾಲಯವು ಜಿಲ್ಲೆಯ ಪ್ರಥಮ ಇ–ಗ್ರಂಥಾಲಯವಾಗಿದ್ದು ಪಂಚಾಯತ್ ರಾಜ್ ಇಲಾಖೆ ಆಯುಕ್ತರಾದ ಶ್ರೀಮತಿ ಪ್ರಿಯಾಂಕ ಮೇರಿ ಫ್ರಾನ್ಸಿಸ್ ರವರು 16.01.2021 ರಂದು ಉಧ್ಘಾಟಿಸಿದರು ಇದು ಜಿಲ್ಲೆಯ ಮೊದಲ ಬೀಕನ್ ಗ್ರಂಥಾಲಯವಾಗಿದೆ. ಈ ಗ್ರಂಥಾಲಯದಲ್ಲಿ 930 ಗ್ರಾಮಸ್ಥರು ವಿಧ್ಯಾರ್ಥಿಗಳು ಸದಸ್ಯತ್ವ ಹೊಂದಿದ್ದು 8.6 ಕೋಟಿ ಇ ಪುಸ್ತಕಗಳಿದೆ. ಹಾಗೂ ಗ್ರಾಮಸ್ಥರಿಗೆ ಉಚಿತ ಮಾಹಿತಿ ಕೇಂದ್ರವಾಗಿ ಕಾರ್ಯನಿರ್ವಹಿಸುತ್ತಿದೆ. ಇಲ್ಲಿ ಮಕ್ಕಳ ಪ್ರತ್ಯೇಕ ಟಾಂಕಿಂಗ್ ಪುಸ್ತಗಳು 3 ಕಂಪ್ಯೂಟರ್, ಪ್ರೀಟರ್, ಸ್ಮಾರ್ಟ್ ಟಿವಿ ಹಾಗೂ ವಿಶೇಷ ಚೇತನರಿಗೆ ಅಗತ್ಯ ಬ್ರೈಲ್ ಪುಸ್ತಕಗಳು ತಂತ್ರಾಂಶಗಳು ಲಭ್ಯವಿದೆ. ಪಿಡಿಎಫ್ ಪುಸ್ತಗಳು, ಸ್ಪರ್ಧಾತ್ಮಕ ಪರೀಕ್ಷೆಗಳ ಪ್ರತ್ಯೇಕ ವಿಭಾಗ ಕಾರ್ಯನಿರ್ವಹಿಸುತ್ತಿದೆ.



### ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್) ರವರ ಭೇಟಿ.



ಇಂದಿನ ವಿದ್ಯಾರ್ಥಿಗಳು ಕೇವಲ ಪಾಠ ಪುಸ್ತಕದ ಜ್ಞಾನವನ್ನು ಮಾತ್ರ ಹೊಂದಿರುತ್ತಾರೆ. ವಿದ್ಯಾರ್ಥಿಗಳು ಕೇವಲ ಪುಸ್ತಕಕ್ಕೆ ಮಾತ್ರ ಸೀಮಿತವಾಗಬಾರದು ಉತ್ತಮ ಭವಿಷ್ಯಕ್ಕೆ ಗ್ರಾಮದಲ್ಲಿರುವ ಅಂಗನವಾಡಿಗಳನ್ನು ವಿದ್ಯಾರ್ಥಿಗಳಿಗೆ ಪೂರಕವಾಗುವ ಗ್ರಂಥಾಲಯವನ್ನಾಗಿ ಮಾರ್ಪಾಡು ಮಾಡಬೇಕು ಎಂದು ಸರಕಾರದ ಅಪರ ಮುಖ್ಯ ಕಾರ್ಯದರ್ಶಿಗಳು(ಪಂ. ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಶ್ರೀಮತಿ ಉಮಾ ಮಹಾದೇವನ್ ಅಭಿಪ್ರಾಯಪಟ್ಟರು. ಅವರು ಹೊದ್ದೂರು ಗ್ರಾಮ ಪಂಚಾಯಿತಿ ಮತ್ತು ಪಂಚಾಯಿತಿ ವ್ಯಾಪ್ತಿಯ ಕಬಡಕೇರಿ ಮತ್ತು ಪಾಲೆಮಾಡಿನ ಸಾವಿತ್ರಿಬಾಯಿ ಫುಲೆ ಗ್ರಂಥಾಲಯಕ್ಕೆ ಭೇಟಿ ನೀಡಿ ಪ್ರಸಂಶಿಸಿದರು. ಗ್ರಂಥಾಲಯಗಳಲ್ಲಿ ದೇಶದ ಗಣ್ಯರ ವ್ಯಕ್ತಿಗಳು, ಗ್ರಾಮೀಣ ಮಟ್ಟದಲ್ಲಿ ಭಾರತೀಯ ಸೈನ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರು ಮತ್ತು ಗ್ರಾಮೀಣ ಮಟದ ಸಾಧಕರ ಭಾವಚಿತ್ರಗಳನ್ನು ಅಳವಡಿಸಬೇಕು. ಇದರಿಂದ ಮಕ್ಕಳು ಮಾನಸಿಕವಾಗಿ ಹಾಗೂ ದೈಹಿಕವಾಗಿ ಬೆಳೆಯುತ್ತಾರೆ. ಇಂದಿನ ವಿದ್ಯಾರ್ಥಿಗಳನ್ನು ಭವಿಷ್ಯ ಭಾರತಕ್ಕೆ ಉತ್ತಮ ಪ್ರಜೆಗಳನ್ನಾಗಿಸುವುದು ಎಂದು ಅಭಿಪ್ರಾಯಪಟ್ಟರು.

### ರಾಜ್ಯದ ಪ್ರಥಮ ಗ್ರಾಮ ಗ್ರಂಥಾಲಯ

ರಾಜ್ಯದ ಮೊದಲ ಗ್ರಾಮ ಗ್ರಂಥಾಲಯವನ್ನು ಹೊದ್ದೂರು ಗ್ರಾಮ ಪಂಚಾಯಿತಿಯಲ್ಲಿ ಪ್ರಾರಂಭಿಸಲಾಗಿದೆ. ಕಟ್ಟಡ ಉನ್ನತೀಕರಣ ಹಾಗೂ ಪೀಟೋಪಕರಣಗಳು ಪಂಚಾಯತಿಯಿಂದ ಒದಗಿಸಿದರೆ ಸಂಪೂರ್ಣವಾಗಿ ಜನರಿಂದ ಸಂಗ್ರಹವಾದ ದೇಣಿಗೆಯಲ್ಲಿ ನಿರ್ಮಿಸಲಾದ ಗ್ರಾಮ ಗ್ರಂಥಾಲಯವಾಗಿದೆ. ಸುಮಾರು 3 ಸಾವಿರ ಪುಸ್ತಕಗಳು ಲಭ್ಯವಿರುತ್ತದೆ. ಪಂಚಾಯತಿ ವ್ಯಾಪ್ತಿಯ 3 ಗ್ರಾಮಗಳಲ್ಲಿ ಪ್ರತ್ಯೇಕ ವಾಚನಾಲಯಗಳನ್ನು ಗ್ರಾಮಸ್ಥರ ಸಹಕಾರದೊಂದಿಗೆ ಪ್ರಾರಂಭಿಸಿ ಓದುಗರೇ ತಮ್ಮ ಗ್ರಂಥಾಲಯ ನಿರ್ವಹಿಸುವ ಯೋಜನೆ ರೂಪಿಸಲಾಯಿತು. ಸಿನಿಮಾ ಚಿತ್ರೀಕರಣಕ್ಕೆ ಪಾಲೆಮಾಡು ಗ್ರಾಮಕ್ಕೆ ಬಂದ ವರನಟ ಡಾ.ರಾಜ್ ಕುಮಾರ್ ಮೊಮ್ಮಗ ವಿನಯ್ ರಾಘವೇಂದ್ರ ರಾಜ್ ಕುಮಾರ್ ವಿಷಯ ತಿಳಿದು 2 ಸಾವಿರ ಅಮೂಲ್ಯ ಪುಸ್ತಕಗಳು ಬೆಲೆಬಾಳುವ ಕ್ರೀಡಾ ಸಾಮಾಗ್ರಿಗಳು ಸ್ವತಃ ನೀಡಿರುತ್ತಾರೆ.




### ಸಂಜೀವಿನಿ ಒಕ್ಕೂಟಗಳ ಭಾಗಿ



ಸ್ವಚ್ಚತಾ ಹಿ ಸೇವಾ ಆಂದೋಲನದಡಿ ಸಂಜೀವಿನಿ ಒಕ್ಕೂಟದ ಸದಸ್ಯರಿಗೆ ತರಬೇತಿ ಕಾರ್ಯಾಗಾರ ಹಾಗೂ ತರಬೇತಿ ನೀಡಲಾಗಿದೆ ಹಾಗೂ ಗ್ರಾಮ ಪಂಚಾಯತಿ ವ್ಯಾಪ್ತಿಯ ವೈಜ್ಞಾನಿಕ ತ್ಯಾಜ್ಯ ವಿಂಗಡಣೆ ನಿರ್ವಹಣೆಗೆ ಒಪ್ಪಂದ ಮಾಡಿಕೊಳ್ಳಲಾಗಿದೆ. ಗ್ರಾಮ ಪಂಚಾಯತಿ ದೂರದೃಷ್ಟಿ ಯೋಜನೆಯ ದ್ವಿತೀಯ ದತ್ತಾಂಶ ಸಂಗ್ರಹಣೆ ಹಾಗೂ ಗ್ರಾಮ ಯೋಜನಾ ವರದಿ ಸಿದ್ದಪಡಿಸುವ ಸಂಬಂಧ ಗ್ರಾಮ ಪಂಚಾಯತಿ ಚುನಾಯಿತ ಪ್ರತಿನಿಧಿಗಳು ಸಂಜೀವಿನಿ ಮಹಿಳಾ ಸ್ವಸಹಾಯ ಗುಂಪುಗಳ ತರಬೇತಿ ಹಾಗೂ ಮಾಹಿತಿ ಸಂಗ್ರಹ ಕಾರ್ಯ ಸರಕಾರದ ಮಾರ್ಗಸೂಚಿಯಂತೆ ಪ್ರಗತಿಯಲ್ಲಿದೆ.

### ಸಾವಿತ್ರಿ ಬಾಯಿ ಫುಲೆ ಜನ್ಮ ದಿನಾಚರಣೆ

ಶಿಕ್ಷಕಿ, ಸಂಚಾಲಕಿ, ಮುಖ್ಯೋಪಾಧ್ಯಾಯಿನಿ ಸಾಮಾಜಿಕ ಮತ್ತು ಮಹಿಳಾ ಹಕ್ಕುಗಳ ಹೋರಾಟಗಾರ್ತಿ, ಭಾರತದ ಮೊಟ್ಟ ಮೊದಲ ಶಿಕ್ಷಕಿ, ದಣಿವರಿಯದ ಸತ್ಯಶೋಧಕಿ. ಆಧುನಿಕ ಶಿಕ್ಷಣದ ತಾಯಿ. ಸಾವಿತ್ರಿಬಾಯಿ ಫುಲೆ ರವರ 192 ನೇ ಜನ್ಮ ಜಯಂತಿಯನ್ನು ಹೊದ್ದೂರು ಗ್ರಾಮ ಪಂಚಾಯಿತಿಯ ಗ್ರಾಮ ಗ್ರಂಥಾಲಯದಲ್ಲಿ ದಿನಾಂಕ 03.01.2023 ರಂದು ಆಚರಿಸಲಾಯಿತು.



### ಶಾಲಾ ಮಕ್ಕಳಿಗೆ ಚಿಣ್ಣರ ಚಿತ್ತಾರ

ಬೆಳೆಯುವ ಸಿರಿ ಮೊಳಕೆಯಲ್ಲಿ ಎಂಬ ನಾಣ್ನುಡಿಯಂತೆ ಶಾಲಾ ಮಕ್ಕಳನ್ನು ಕ್ರಿಯಾತ್ಮಕ ಮತ್ತು ಶೃಜನಾತ್ಮಕ ಕ್ರಿಯೆಗಳಲ್ಲಿ ತೊಡಗಿಸುವುದು ಅವರ ಭೌತಿಕ ಮತ್ತು ಶಾರೀಕರ ಬೆಳವಣಿಗೆಯಲ್ಲಿ ಬಹು ಮುಖ್ಯವಾದ ಪಾತ್ರ ವಹಿಸುತ್ತದೆ. ಈ ಸಲುವಾಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಮಕ್ಕಳುಗಳಿಗೆ ಚಿಣ್ಣರ ಚಿತ್ತಾರ ಕಾರ್ಯಕ್ರಮವನ್ನು ನಡೆಸಲಾಗಿದೆ. ಇದರಡಿ ಮಕ್ಕಳು ಅಂದವಾದ ಬಣ್ಣ ಬಣ್ಣದ ಚಿತ್ರಗಳನ್ನು ಬರೆದು ಎಲ್ಲರ ಪ್ರಶಂಸೆಗೆ ಒಳಗಾದರು.



### ವಿಶೇಷಚೇತನ ಗ್ರಾಮ ಸಭೆ



ವಿಶೇಷಚೇತನರು ಅಂಗ ವೈಕಲ್ಯತೆಯುಳ್ಳ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ(2016) ರ ಕಾನೂನಿನಡಿ ಸರಕಾರದ ವಿವಿಧ ಸೌಲಭ್ಯಗಳನ್ನು ಪಡೆಯುವ ಕುರಿತು ಮಾಹಿತಿ ನೀಡಲಾಯಿತು. ವಿವಿಧ ಅಂಗವೈಕ್ಯಲ್ಯತೆಗಳಾದ ದೃಷ್ಟಿದೋಷವುಳ್ಳ ವ್ಯಕ್ತಿಗಳು, ಶೃವಣದೋಷವುಳ್ಳವರು ಹಾಗೂ ದೈಹಿಕ ಅಂಗವಿಕಲತೆಯುಳ್ಳ ವ್ಯಕ್ತಿಗಳಿಗೆ ಅನುಕೂಲವಾಗುವಂತೆ ಪೂರಕ ಕಟ್ಟಡ ವಿನ್ಯಾಸ, ವಿಶೇಷ ಕಲಿಕಾ ಸಾಮಾಗ್ರಿಗಳನ್ನು ಒಳಗೊಂಡಂತೆ ವಿವಿಧ ಅಡೆತಡೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಹೊದ್ದೂರು ಗ್ರಾಮ ಪಂಚಾಯಿತಿಯಲ್ಲಿ ಬೀಕನ್ ಗ್ರಂಥಾಲಯವನ್ನು ಪ್ರಾರಂಭಿಸಲಾಗಿದ್ದು, ಇದು ಜಿಲ್ಲೆಯಲ್ಲಿಯೇ ಮೊದಲ ಬೀಕನ್ ಗ್ರಂಥಾಲಯವಾಗಿರುತ್ತದೆ. ಇದರ ಸದುಪಯೋಗ ಪಡೆದುಕೊಳ್ಳುವಂತೆ ವಿಶೇಷಚೇತರ ಸಮನ್ವಯ ಗ್ರಾಮ ಸಭೆಯಲ್ಲಿ ಸಲಹೆ ನೀಡಲಾಯಿತು.